# **ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ:- 2017-18ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-64 ಕೃಷಿಕರ ಜಮೀನಿನಲ್ಲಿ ಕೊಳ ನಿರ್ಮಿಸಿ ಸಾಂದ್ರೀಕೃತ ಮೀನು ಕೃಷಿ ಕೈಗೊಳ್ಳಲು ಉತ್ತೇಜನ ನೀಡುವ ಕುರಿತು.

ಓದಲಾಗಿದೆ:- ಪತ್ರ ಸಂಖ್ಯೆ: ಮೀನಿ/164/ಪಂವಾಯೋ(1)/2016, ದಿನಾಂಕ: 18-04-2017.

******

## **ಪ್ರಸ್ತಾವನೆ:**

ರಾಜ್ಯ ಸರ್ಕಾರವು 2017-18 ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-64 ರಲ್ಲಿ ಸಾಕಷ್ಟು ನೀರಿನ ಸಂಪನ್ಮೂಲವುಳ್ಳ ಜಮೀನು ಹೊಂದಿರುವ ಕೃಷಿಕರಿಗೆ ಅವರ ಜಮೀನುಗಳಲ್ಲಿ ಕೊಳ ನಿರ್ಮಿಸಿ, ಸಾಂದ್ರೀಕೃತ ಮೀನು ಕೃಷಿ ಕೈಗೊಳ್ಳಲು ಉತ್ತೇಜನ ನೀಡಲಾಗುವುದು. ಹೂಡಿಕೆ ವೆಚ್ಚ ಸೇರಿದಂತೆ ಮೀನು ಕೊಳ ನಿರ್ಮಾಣದ ಘಟಕ ವೆಚ್ಚ ರೂ.8.50 ಲಕ್ಷ ಹಾಗೂ ಗರಿಷ್ಟ ರೂ.4.25 ಲಕ್ಷಕ್ಕೆ ಒಳಪಟ್ಟು ಶೇ.50 ರಷ್ಟು ಸಹಾಯಧನ ನೀಡಿ, ಮೀನು ಕೃಷಿಗೆ ಉತ್ತೇಜನ ನೀಡಲಾಗುವುದು ಎಂದು ಘೋಷಿಸಲಾಗಿದೆ.

ಮೇಲೆ ಓದಲಾದ ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು ಇವರ ಪತ್ರದಲ್ಲಿ, ಮೀನುಗಾರಿಕೆಯು ಮಾನವನಿಗೆ ಬೇಕಾದ ಉತ್ತಮ ಪ್ರಾಣಿಜನ್ಯ ಪೌಷ್ಠಿಕ ಅಹಾರವನ್ನು ಕಡಿಮೆ ಬೆಲೆಯಲ್ಲಿ ಒದಗಿಸುವುದಲ್ಲದೆ ಲಕ್ಷಾಂತರ ಜನರಿಗೆ ಉದ್ಯೋಗ ಹಾಗೂ ಜೀವನನಿರ್ವಹಣೆಗೆ ಅವಕಾಶವನ್ನು ಕಲ್ಪಿಸಿದೆ. ರಾಜ್ಯದಲ್ಲಿ ಮೀನು ಕೃಷಿಕರು ಸ್ವಂತ ಜಮೀನಿನಲ್ಲಿ ಕೊಳ ನಿರ್ಮಾಣ ಮಾಡಿ ಮೀನು ಕೃಷಿಯನ್ನು ನಡೆಸುತ್ತಿದ್ದಾರೆ. ಸಾಕಷ್ಟು ನೀರಿನ ಸೌಕರ್ಯವುಳ್ಳಂತಹ ಸ್ವಂತ ಜಮೀನಿನಲ್ಲಿ ಕೊಳ ನಿರ್ಮಿಸಿ ಮೀನು ಸಾಕಾಣಿಕೆಯಿಂದ ಪ್ರತಿ ಎಕರೆ ಜಲವಿಸ್ತೀರ್ಣಕ್ಕೆ ಸುಮಾರು ರೂ.3.00 ಲಕ್ಷ ದಿಂದ 4.00 ಲಕ್ಷ ಮೌಲ್ಯದ 3000-4000 ಕೆ.ಜಿ ಮೀನನ್ನು ಉತ್ಪಾದಿಸಬಹುದಾಗಿರುತ್ತದೆ. ರಾಜ್ಯದ ತುಂಗಭದ್ರಾ ಮತ್ತು ಕೃಷ್ಣಾ ಜಲಾನಯನ ಪ್ರದೇಶದಲ್ಲಿ ಅದರಲ್ಲೂ, ಮುಖ್ಯವಾಗಿ ಬಳ್ಳಾರಿ, ರಾಯಚೂರು ಜಿಲ್ಲೆಯ ಪ್ರದೇಶಗಳಲ್ಲಿ ರೈತರು ಸುಮಾರು 9000 ಹೆಕ್ಟೇರ್ ಪ್ರದೇಶದಲ್ಲಿ ಮೀನು ಸಾಕಾಣಿಕೆ ನಡೆಸುತ್ತಿದ್ದಾರೆ. ಇದರಿಂದ ರೈತರಿಗೆ ಹೆಚ್ಚಿನ ಆದಾಯ ದೊರೆಯುವುದರ ಜೊತೆಗೆ ಪ್ರೋಟೀನ್‌ಯುಕ್ತ ಆಹಾರ ಉತ್ಪಾದನೆಗೆ ನೆರವಾಗಲಿದೆ.

ಕೇಂದ್ರ ಪುರಸ್ಕೃತ ಯೋಜನೆ - ನೀಲಿಕ್ರಾಂತಿ ಮೀನುಗಾರಿಕೆ ಸಮಗ್ರ ಅಭಿವೃದ್ದಿ ಮತ್ತು ನಿರ್ವಹಣೆ ಯೋಜನೆಯನ್ನು ಜಾರಿಗೆ ತಂದಿದ್ದು, ಸದರಿ ಯೋಜನೆಯನ್ನು ಕರ್ನಾಟಕದಲ್ಲಿ ಅನುಷ್ಠಾನಗೊಳಿಸಲು ಹೊಸ ಲೆಕ್ಕ ಶೀರ್ಷಿಕೆ ಸೃಜನೆ ಮಾಡಿ ಅನುಮೋದನೆ ನೀಡಲಾಗಿದೆ

-2-

ಹಾಗೂ ಸದರಿ ಯೋಜನೆಯ ಅನುಷ್ಠಾನಕ್ಕಾಗಿ ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ. ಸದರಿ ಯೋಜನೆಯಡಿ ರೈತರ ಜಮೀನಿನಲ್ಲಿ ಕೊಳ ನಿರ್ಮಿಸಲು ಪ್ರತಿ ಹೆಕ್ಟೇರ್ ಜಲವಿಸ್ತೀರ್ಣಕ್ಕೆ ರೂ.7.00 ಲಕ್ಷಗಳ ಘಟಕ ವೆಚ್ಚದಲ್ಲಿ ಹಾಗೂ ಹೂಡಿಕೆ ವೆಚ್ಚ ಪ್ರತಿ ಹೆಕ್ಟೇರ್‌ಗೆ ರೂ.1.50 ಲಕ್ಷದಲ್ಲಿ ಶೇ.50ರಷ್ಟು ಅಂದರೆ ಗರಿಷ್ಟ ರೂ.4.25 ಲಕ್ಷಗಳ ಸಹಾಯಧನವನ್ನು ನೀಡಲು ಅನುಮೋದನೆ ನೀಡಿರುತ್ತದೆ. ಈ ಯೋಜನೆಯಲ್ಲಿ ರಾಜ್ಯದ ರೈತರು ಸದುಪಯೋಗಪಡಿಸಿ ಕೊಳ್ಳಲು ನೀರಿನ ಸೌಲಭ್ಯವಿರುವ ಸ್ವಂತ ಜಮೀನಿನಲ್ಲಿ ಕೊಳ ನಿರ್ಮಿಸಿ ಮೀನು ಸಾಕಾಣಿಕೆ ನಡೆಸಲು ಪ್ರೋತ್ಸಾಹಿಸುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಯೋಜಿಸಲಾಗಿದೆ.

ಈ ಕಾರ್ಯಕ್ರಮವನ್ನು ಸರ್ಕಾರದ ಆದೇಶ ಸಂಖ್ಯೆ: ಪಸಂಮೀ 39 ಮೀಇಯೋ 2017 ದಿನಾಂಕ: 15-3-2017 ರನ್ವಯದಲ್ಲಿನ ಷರತ್ತು ಮತ್ತು ನಿಬಂಧನೆಗಳಂತೆ ಫಲಾನುಭವಿಗಳ ಆಯ್ಕೆ ಮಾಡಿ ಕಾರ್ಯಕ್ರಮದ ಅನುಷ್ಠಾನ ನಡೆಸಿ ಸಹಾಯಧನವನ್ನು ಬಿಡುಗಡೆ ಮಾಡಲು ಕ್ರಮವಹಿಸಲಾಗುವುದೆಂದು ತಿಳಿಸುತ್ತಾ, ಈ ಯೋಜನೆಯ ವೆಚ್ಚವನ್ನು ಲೆಕ್ಕಶೀರ್ಷಿಕೆ 2405-ಮೀನುಗಾರಿಕೆ-00-101-ಒಳನಾಡು ಮೀನುಗಾರಿಕೆ-0-58-ನೀಲಿಕ್ರಾಂತಿ-ಸಮಗ್ರ ಮೀನುಗಾರಿಕೆ ಅಭಿವೃದ್ಧಿ ಮತ್ತು ನಿರ್ವಹಣೆ (ಕೇಂದ್ರ ಪುರಸ್ಕೃತ ಯೋಜನೆ) ಯಡಿ 2017-18ನೇ ಸಾಲಿನಲ್ಲಿ ಒದಗಿಸಿರುವ ಅನುದಾನದಿಂದ ಭರಿಸಲಾಗುವುದೆಂದು ತಿಳಿಸುತ್ತಾ, ಸದರಿ ಕಾರ್ಯಕ್ರಮವನ್ನು 2017-18ನೇ ಸಾಲಿನಲ್ಲಿ ಅನುಷ್ಠಾನಗೊಳಿಸಲು ಮಂಜೂರಾತಿ ನೀಡಲು ಕೋರಿರುತ್ತಾರೆ.

ಮೀನುಗಾರಿಕೆ ನಿರ್ದೇಶಕರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ: ಪಸಂಮೀ 68 ಮೀಇಯೋ 2017, ಬೆಂಗಳೂರು ದಿನಾಂಕ: 04-07-2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2017-18ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-64 ರಲ್ಲಿ ಘೋಷಿಸಲಾದಂತೆ, ಸಾಕಷ್ಟು ನೀರಿನ ಸಂಪನ್ಮೂಲವುಳ್ಳ ಜಮೀನು ಹೊಂದಿರುವ ಕೃಷಿಕರಿಗೆ ಅವರ ಜಮೀನುಗಳಲ್ಲಿ ಕೊಳ ನಿರ್ಮಿಸಿ ಸಾಂದ್ರೀಕೃತ ಮೀನು ಕೃಷಿ ಕೈಗೊಳ್ಳಲು ಹೂಡಿಕೆ ವೆಚ್ಚ ಸೇರಿದಂತೆ ಮೀನು ಕೊಳ ನಿರ್ಮಾಣದ ಘಟಕ ವೆಚ್ಚ ರೂ.8.50 ಲಕ್ಷ ಹಾಗೂ ಗರಿಷ್ಟ ರೂ.4.25 ಲಕ್ಷಕ್ಕೆ ಒಳಪಟ್ಟು ಶೇ.50 ರಷ್ಟು ಸಹಾಯಧನ ನೀಡಿ, ಮೀನು ಕೃಷಿಗೆ ಕೇಂದ್ರ ಪುರಸ್ಕೃತ ನೀಲಿಕ್ರಾಂತಿ ಯೋಜನೆಯಡಿ ಸರ್ಕಾರದ ಆದೇಶ ಸಂಖ್ಯೆ: ಪಸಂಮೀ/39/ಮೀಇಯೋ/2017, ದಿನಾಂಕ: 15-03-2017ರಲ್ಲಿನ ಮಾರ್ಗಸೂಚಿಗಳನ್ವಯ ಲೆಕ್ಕ ಶೀರ್ಷಿಕೆ 2405-00-101-0-58 ರಡಿ ಒದಗಿಸಿರುವ ಅನುದಾನದಿಂದ ಅನುಷ್ಠಾನಗೊಳಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಈ ಆದೇಶವನ್ನು ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿ/44/ಪಿಎಫ್ಒ/2016, ದಿನಾಂಕ: 25-04-2017 ಮತ್ತು ಆರ್ಥಿಕ ಇಲಾಖೆ ಟಿಪ್ಪಣಿ ಸಂಖ್ಯೆ: ಆಇ/320/ವೆಚ್ಚ-4/2017, ದಿನಾಂಕ: 03-05-2017 ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ರಶ್ಮಿ ಶಿವಶಂಕರ ಪೋಳ)

ಸರ್ಕಾರದ ಅಧೀನ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ
(ಮೀನುಗಾರಿಕೆ)

**ಇವರಿಗೆ:**

1) ಪ್ರಧಾನ ಮಹಾಲೇಖಪಾಲರು (ಜಿ&ಎಸ್ಎಸ್ಎ)(ಇ&ಆರ್ಎಸ್ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಬೆಂಗಳೂರು.
2) ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
3) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ (ಸಚಿವ ಸಂಪುಟ ಶಾಖೆ), ವಿಧಾನಸೌಧ, ಬೆಂಗಳೂರು (ಸಚಿವ ಸಂಪುಟದ ಪ್ರಕರಣ ಸಂಖ್ಯೆ: ಸಿ 385/2017)
4) ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು.
5) ನಿರ್ದೇಶಕರು (ಪಿಎಫ್‌ಡಿ), ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
6) ಜಂಟಿ ನಿರ್ದೇಶಕರು, ಗಣಕ ಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
7) ಸಂಬಂಧಪಟ್ಟ ಮೀನುಗಾರಿಕೆ ಉಪ ನಿರ್ದೇಶಕರುಗಳಿಗೆ – ಮೀನುಗಾರಿಕೆ ನಿರ್ದೇಶಕರ ಮುಖಾಂತರ.
8) ಆಂತರಿಕ ಆರ್ಥಿಕ ಸಲಹೆಗಾರರು, ಕೃ.ತೋ. ಮತ್ತು ಪ.ಸಂ.ಮೀ. ಇಲಾಖೆ.
9) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4), ವಿಧಾನಸೌಧ, ಬೆಂಗಳೂರು.
10) ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
11) ಶಾಖಾ ರಕ್ಷಾ ಕಡತ / ಸಮನ್ವಯ-ಕಂಪೆಂಡಿಯಮ್ / ಹೆಚ್ಚುವರಿ ಪ್ರತಿಗಳು.